ಯೋಜನೆಯನ್ನು ಜಾರಿಗೊಳಿಸಲು ಸಾಧ್ಯವಾಗಿಲ್ಲ. ಯೋಜನೆಯ ಸಾಧಕ ಬಾದಕಗಳ ಬಗ್ಗೆ ಮತ್ತೊಮ್ಮೆ ಪರಿಶೀಲಿಸಿ ಕ್ರಮವಹಿಸಬೇಕಾಗಿರುತ್ತದೆ.

ಹಂಪಿಯ ಧ್ವನಿ ಮತ್ತು ಬೆಳಕು ಕಾಮಗಾರಿ

570(1284), ಶ್ರೀ ಆನಂದ ಸಿಂಗ್ (ವಿಜಯನಗರ–ಬಳ್ಳಾರಿ)

ಅ) ವಿಶ್ವ ವಿಖ್ಯಾತ ಹಂಪಿ ಪ್ರವಾಸಿ ಸ್ಥಳದಲ್ಲಿ ಧ್ವನಿ ಮತ್ತು ಬೆಳಕು ಕಾಮಗಾರಿಯ ಗುಣಮಟ್ಟದ ಬಗ್ಗೆ ಮುಖ್ಯ ವಿದ್ಯುತ್ ಪರಿವೀಕ್ಷರಿಂದ ತನಿಖೆಯ ನಂತರವು ಸಹ ಸದರಿ ಕಾಮಗಾರಿಯಲ್ಲಿ ಯಾವುದೇ ಪ್ರಗತಿ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ (ವಿವರವಾದ ಮಾಹಿತಿ ನೀಡುವುದು)

ಆ) ಸದರಿ ಕಾಮಗಾರಿಯ ಗುಣಮಟ್ಟವನ್ನು ಸರಿಪಡಿಸುವ ಬಗ್ಗೆ ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?

ಶ್ರೀ ಆರ್.ವಿ.ದೇಶಪಾಂಡೆ (ಉನ್ನತ ಶಿಕ್ಷಣ ಮತ್ತು ಪ್ರವಾಸೋದ್ಯಮ ಸಚಿವರು)

ಅ) ಮತ್ತು ಆ) ವಿಶ್ವ ಪರಂಪರಾ ಕೇಂದ್ರವಾದ ಹಂಪಿಯಲ್ಲಿ ಧ್ವನಿ ಮತ್ತು ಬೆಳಕು ಯೋಜನೆ ಜಾರಿಗೊಳಿಸುವ ಕಾಮಗಾರಿಯನ್ನು ಆಯುಕ್ತರು, ಹಂಪಿ ವಿಶ್ವ ಪರಂಪರಾ ಪ್ರದೇಶ ನಿರ್ವಹಣಾ ಪ್ರಾಧಿಕಾರ, ಹೊಸಪೇಟೆ ರವರಿಗೆ ವಹಿಸಲಾಗಿದೆ. ಸದರಿ ಪ್ರಾಧಿಕಾರವು ಟೆಂಡರ್ ಕರೆದು ಕಾಮಗಾರಿಯನ್ನು ಮೆ॥ ಇನೋವೇಟಿವ್ ಲೈಟಿಂಗ್ ಸಿಸ್ಟಮ್ಸ್, ಬೆಂಗಳೂರು ರವರಿಗೆ ದಿನಾಂಕ:19.02.2010 ರಂದು ವಹಿಸಿರುತ್ತದೆ. ಈ ಕಾಮಗಾರಿಯಲ್ಲಿನ ಲೋಪದೋಷಗಳನ್ನು ಸರಿಪಡಿಸಲಾಗಿದೆ ಎಂಬುದಾಗಿ ವಿದ್ಯುತ್ ಪರಿವೀಕ್ಷಕರು ಬಳ್ಳಾರಿ ರವರು ದಿನಾಂಕ:12.12.2013 ರಂದು ಪ್ರಮಾಣ ಪತ್ರ ಸಲ್ಲಿಸಿರುತ್ತಾರೆ.

ಹಂಪಿಯಲ್ಲಿ ಕೆಳಕಂಡ ನಾಲ್ಕು ಪ್ರದೇಶಗಳಲ್ಲಿ ಧ್ವನಿ ಮತ್ತು ಬೆಳಕು ಕಾಮಗಾರಿಯನ್ನು ಜಾರಿಗೊಳಿಸಲಾಗುತ್ತಿದೆ.

1. ಎದುರು ಬಸವಣ್ಣ ದೇವಾಲಯ

2. ಕೋದಂಡರಾಮ ದೇವಾಲಯ

3. ಪ್ರಸನ್ನ ನರಸಿಂಹ ದೇವಾಲಯ

4. ಕಿಂಗ್ಸ್ ಬ್ಯಾಲೆನ್ಸ್ ಬಳಿ

ಮೇಲ್ಕಂಡ ಕಾಮಗಾರಿಗಳ ಪೈಕಿ ಕ್ರಮ ಸಂಖ್ಯೆ 1 ಮತ್ತು 2 ರಲ್ಲಿರುವ ಕಾಮಗಾರಿಗಳು ಪೂರ್ಣಗೊಂಡಿದ್ದು ಉಳಿದ ಎರಡು ಕಾಮಗಾರಿಗಳನ್ನು ಪೂರ್ಣಗೊಳಿಸಬೇಕಾಗಿರುತ್ತದೆ. ಉಳಿಕೆ ಕಾಮಗಾರಿಗಳನ್ನು ಜರೂರಾಗಿ ಪೂರ್ಣಗೊಳಿಸುವಂತೆ ಆಯುಕ್ತರು, ಹಂಪಿ ವಿಶ್ವ ಪರಂಪರಾ ಪ್ರದೇಶ ನಿರ್ವಹಣಾ ಪ್ರಾಧಿಕಾರ, ಹೊಸಪೇಟೆ ರವರಿಗೆ ಸೂಚಿಸಲಾಗಿದೆ.

2012–13ನೇ ಸಾಲಿನ ಕಾಮಗಾರಿಗಳು

571(1285), ಶ್ರೀ ಆನಂದ ಸಿಂಗ್ (ವಿಜಯನಗರ–ಬಳ್ಳಾರಿ)

ಅ) 2012–13ನೇ ಸಾಲಿನಲ್ಲಿ ಬಳ್ಳಾರಿ ಜಿಲ್ಲೆ, ವಿಜಯನಗರ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ಪ್ರವಾಸೋದ್ಯಮ ಇಲಾಖೆಯ ವತಿಯಿಂದ ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ ಅನುಮೋದನೆಗೊಂಡ ಕಾಮಗಾರಿಗಳ ವಿವರಗಳನ್ನು ನೀಡುವುದು.

ಆ) ಸದರಿ ಕಾಮಗಾರಿಗಳ ಪ್ರಸ್ತುತ ಪ್ರಗತಿಯ ವಿವರಗಳನ್ನು ನೀಡುವುದು;

ಇ) ಕೆಲವೊಂದು ಕಾಮಗಾರಿಗಳು ಅಪೂರ್ಣಗೊಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದರಿ ಕಾಮಗಾರಿಗಳನ್ನು ಯಾವಾಗ ಪೂರ್ಣಗೊಳಿಸಲಾಗುವುದು.